ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು : ಶ್ರೀ ಎನ್.ರವಿಕುಮಾರ್
(ವಿಧಾನ ಸಭೆಯಿಂದ ಚುನಾಯಿತರಾದವರು )

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 919

ಉತ್ತರಿಸಬೇಕಾದ ದಿನಾಂಕ : 17-12-2024

ಉತ್ತರಿಸಬೇಕಾದ ಸಚಿವರು : ಸಹಕಾರ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯ ಅಪೆಕ್ಸ್ ಬ್ಯಾಂಕ್ ನಿ., ಇಲ್ಲಿ ಸಹಾಯಕರ ಹುದ್ದೆಗೆ ಸರ್ಕಾರದ ನಿಯಮಗಳನ್ನು ಮೀರಿ ಅರ್ಜಿ ಆಹ್ವಾನಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರದ ನಿಲುವೇನು: (ವಿವರ ನೀಡುವುದು) | ಕರ್ನಾಟಕ ರಾಜ್ಯ ಅಪೆಕ್ಸ್ ಬ್ಯಾಂಕ್ ನಿ., ಬೆಂಗಳೂರು ಈ ಬ್ಯಾಂಕಿನಲ್ಲಿ ದಿ:05-03-2024 ರಂದು 93 ಸಹಾಯಕರ ಹುದ್ದೆಗೆ ನೇಮಕ ಮಾಡಿಕೊಳ್ಳಲು ಅಧಿಸೂಚನೆಯನ್ನು ದಿ: 05.03.2024 ರಲ್ಲಿ ಪತ್ರಿಕಾ ಪ್ರಕಟಣೆ ಹೊರಡಿಸಿದ್ದು, ಸದರಿ ಅಧಿಸೂಚನೆಯನ್ನು ಜಾರಿಯಲ್ಲಿದ್ದ ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 ಮತ್ತು ನಿಯಮಗಳು 1960 ರಲ್ಲಿನ ಅವಕಾಶಗಳನ್ವಯ ನೇಮಕಾತಿ ಪ್ರಕಟಣೆಯನ್ನು ಹೊರಡಿಸಲಾಗಿದೆ. |
| ಆ) | ರಾಜ್ಯ ಸರ್ಕಾರವು ಗ್ರೂಪ್ "ಬಿ" ಮತ್ತು ಗ್ರೂಪ್ "ಸಿ" ಹುದ್ದೆಗಳಿಗೆ ಗರಿಷ್ಠ ವಯೋಮಿತಿಯಲ್ಲಿ 3 ವರ್ಷಗಳ ಸಡಿಲಿಕೆಯನ್ನು ನೀಡಿ ಆದೇಶ ಹೊರಡಿಸಿದರೂ ಕರ್ನಾಟಕ ರಾಜ್ಯ ಅಪೆಕ್ಸ್ ಬ್ಯಾಂಕ್ ನಿ., ಇಲ್ಲಿ ಸಹಾಯಕರ ಹುದ್ದೆಗೆ ಹೊರಡಿಸಲಾದ ಪ್ರಕಟಣೆಯಲ್ಲಿ ಈ ಅಂಶವನ್ನು ಪರಿಗಣಿಸದೆ ಅಧಿಸೂಚನೆ ಹೊರಡಿಸಿರುವ ಬಗ್ಗೆ | ಕರ್ನಾಟಕ ರಾಜ್ಯ ಅಪೆಕ್ಸ್ ಬ್ಯಾಂಕ್ ನಿ, ಬೆಂಗಳೂರು ಈ ಬ್ಯಾಂಕಿನಲ್ಲಿ ಸಹಾಯಕರ ಹುದ್ದೆಗೆ ಅರ್ಜಿಯನ್ನು ಆಹ್ವಾನಿಸಿ ದಿನಾಂಕ:07-03-2024 ರಿಂದ 06-04-2024 ರವರೆಗೆ ಅರ್ಹ ಅಭ್ಯರ್ಥಿಗಳಿಗೆ ಅರ್ಜಿ ಸಲ್ಲಿಸಲು ಕಾಲಾವಕಾಶ ನೀಡಿದ್ದು, ಕಾಲಾವಕಾಶ ಮುಕ್ತಾಯಗೊಂಡಿರುತ್ತದೆ. ಅದೇ ರೀತಿ ದಿನಾಂಕ: 01-09-2024 ರಂದು ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 166 ಸೇನೆನಿ 2024, ದಿನಾಂಕ:10-09-2024 ರ ಆದೇಶದ ಪೂರ್ವದಲ್ಲೇ ಲಿಖಿತ ಪರೀಕ್ಷೆ ಸಹ ಪೂರ್ಣಗೊಂಡಿರುತ್ತದೆ. |

| | | |
|---|---|---|
| | ಸರ್ಕಾರದ ನಿಲುವೇನು; (ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 166 ಸೆನೆನಿ 2024, ದಿ:10.09.2024 ರಲ್ಲಿ ರಾಜ್ಯ ಸಿವಿಲ್ ಸೇವೆಗಳಲ್ಲಿನ ವಿವಿಧ ಇಲಾಖೆಗಳ ಗ್ರೂಪ್ ಸಿ ಮತ್ತು ಗ್ರೂಪ್ ಬಿ ಹುದ್ದೆಗಳಿಗೆ ಎಂದಿರುವುದರಿಂದ ಸಹಕಾರ ಬ್ಯಾಂಕುಗಳಲ್ಲಿನ ಹುದ್ದೆಗಳ ನೇಮಕಾತಿಗೆ ಇದು ಅನ್ವಯಿಸುವುದಿಲ್ಲ. |
| ಇ) | ಈಗಾಗಲೇ ಹೊರಡಿಸಿರುವ ಪ್ರಕಟಣೆಯನ್ನು ಹಿಂಪಡೆದು ಹೊಸದಾಗಿ ಸಹಾಯಕರ ಹುದ್ದೆಗೆ ಪ್ರಕಟಣೆ ಹೊರಡಿಸಲು ಆದೇಶ ನೀಡುವ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು (ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 166 ಸೆನೆನಿ 2024, ದಿನಾಂಕ:10–09–2024 ರ ಆದೇಶದ ಪೂರ್ವದಲ್ಲೇ ನೇಮಕಾತಿಗೆ ಅರ್ಜಿಯನ್ನು ಆಹ್ವಾನಿಸಿ ದಿನಾಂಕ:01–09–2024 ರಂದು ಲಿಖಿತ ಪರೀಕ್ಷೆಯು ಪೂರ್ಣಗೊಂಡಿರುವುದರಿಂದ ಈ ಹಂತದಲ್ಲಿ ಪ್ರಕಟಣೆಯನ್ನು ಹಿಂತೆಗೆದುಕೊಳ್ಳಲು ಬರುವುದಿಲ್ಲ. |

**ಸಂಖ್ಯೆ: ಸಿಒ 298 ಸಿಎಲ್ಎಸ್ 2024**

K. N. Rajanna

**(ಕೆ.ಎನ್.ರಾಜಣ್ಣ)**
**ಸಹಕಾರ ಸಚಿವರು**